**<u>ಸಾಕ್ಷಿಗೆ ದಿನಾಂಕ 25.10.2025 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀ. ಜಿ ಎಂ ವಕೀಲರಿಂದ:</u>**

**1.** ನಾನು ಈ ಪ್ರಕರಣದಲ್ಲಿ ಅರ್ಜಿದಾರರ ಪರ ಸಾಕ್ಷಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

**2.** ನಾನು ಈ ಪ್ರಕರಣದಲ್ಲಿ ಈ ದಿನ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿದಾರರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 27 | ಆಧಾರ್ ಕಾರ್ಡ್ ನ ನೋಟರೀಕೃತ ದಾಖಲೆ (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಗಿದೆ) |

**<u>ಪಾಟೀ ಸವಾಲು: 1ನೇ ಎದುರುದಾರರ ಪರ ಶ್ರೀ. ಕೆ ಎನ್ ವಕೀಲರಿಂದ:</u>**

3. ನನ್ನ ಮುಖ್ಯವಿಚಾರಣಾ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ಸಂಗತಿಗಳು ಸತ್ಯವಾಗಿರುತ್ತದೆ. ನಾನು ವ್ಯವಸಾಯ ಮಾಡಿಕೊಂಡಿರುತ್ತೇನೆ. ನನಗೆ 35 ವರ್ಷ. ನನಗೆ ಅರ್ಜಿದಾರರ ಪರಿಚಯವಿರುವುದಿಲ್ಲ. ಅಪಘಾತದ ದಿನ ಅರ್ಜಿದಾರರು KA-43-R-7558 ರ ದ್ವಿಚಕ್ರ ವಾಹನದ ಮೇಲೆ ಬರುತ್ತಿದ್ದರು. ಅಪಘಾತದ ಸಮಯದಲ್ಲಿ ಅರ್ಜಿದಾರರ ಬೈಕಿನ ಸುಮಾರು 50 ಅಡಿ ಅಂತರದ ಹಿಂದಿನಿಂದ ನಾನು ದ್ವಿಚಕ್ರ ವಾಹನದ ಮೇಲೆ ಬರುತ್ತಿದ್ದೆನು. ಅಪಘಾತವು ಬೆಳಗ್ಗೆ 8.30 ಕ್ಕೆ ಆಗಿರುತ್ತದೆ. ಅರ್ಜಿದಾರರು ದ್ವಿಚಕ್ರ ವಾಹನವನ್ನು ನಿಧಾನವಾಗಿ ಚಲಾಯಿಸುತ್ತಿದ್ದರು. ಅಪಘಾತ ಪಡಿಸಿದ ಟ್ರಾಕ್ಟರ್ ನಂಬರ್ KA-06-TC-7399/7400 ಇರುತ್ತದೆ. ಅಪಘಾತವು

ಅರ್ಜಿದಾರರ ತಪ್ಪಿನಿಂದ ಉಂಟಾಗಿದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಅರ್ಜಿದಾರರು ರಸ್ತೆಯ ಎಡಭಾಗದಲ್ಲಿ ಚಲಿಸುತ್ತಿದ್ದರು, ಟ್ರಾಕ್ಟರ್ ಚಾಲಕ ಬಲಗಡೆಗೆ ಚಾಲನೆ ಮಾಡಿ ಡಿಕ್ಕಿ ಪಡಿಸಿರುತ್ತಾನೆ ಎಂದು ನುಡಿಯುತ್ತಾರೆ.

4. ಅಪಘಾತದ ನಂತರ ಅರ್ಜಿದಾರರನ್ನು ಆಸ್ಪತ್ರೆಗೆ ನಾನೇ ಆ್ಯಂಬುಲೆನ್ಸ್ ವಾಹನ ಮೂಲಕ ಕರೆದುಕೊಂಡು ಹೋಗಿ ಕೊರಟಗೆರೆ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿರುತ್ತೇನೆ ಮತ್ತು ಅರ್ಜಿದಾರರ ಮನೆಯವರಿಗೆ ಮಾಹಿತಿ ನೀಡಿರುತ್ತೇನೆ. ಅರ್ಜಿದಾರರ ಮನೆಯವರು ತುಮಕೂರು ಆಸ್ಪತ್ರೆಗೆ ದಾಖಲಿಸಿರುತ್ತಾರೆ. ಪೊಲೀಸರು ಬಂದು ನನ್ನನ್ನು ಮಹಜರಿಗೆ ಕರೆದಿರುತ್ತಾರೆ ಮತ್ತು ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**2 ನೇ ಎದುರುದಾರರು ಏಕಪಕ್ಷೀಯ**

**ಮರುವಿಚಾರಣೆ- ಇಲ್ಲ**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**